# ಮಾಹಿತಿ ಹಕ್ಕು ಅಧಿನಿಯಮ, 2005

## (ಅಧಿನಿಯಮ ಸಂಖ್ಯೆ2005ರ 22)

[15ನೇ ಜೂನ್ 2005]

ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರದ ಕಾರ್ಯನಿರ್ವಹಣೆಯಲ್ಲಿ ಪಾರದರ್ಶಕತೆ ಮತ್ತು ಉತ್ತರದಾಯಿತ್ವವನ್ನು ಹೆಚ್ಚಿಸುವ ದೃಷ್ಠಿಯಿಂದ ಸರ್ಕಾರೀ ಪ್ರಾಧಿಕಾರಗಳ ನಿಯಂತ್ರಣದಲ್ಲಿರುವ ಮಾಹಿತಿಯನ್ನು ಪಡೆಯಲು ನಾಗರಿಕರಿಗೆ ಮಾಹಿತಿ ಪಡೆಯುವ ಹಕ್ಕಿನ ಕಾರ್ಯರೂಪದ ವ್ಯವಸ್ಥೆಯನ್ನು ರೂಪಿಸುವುದಕ್ಕೆ, ಕೇಂದ್ರ ಮಾಹಿತಿ ಆಯೋಗದ ರಚನೆಗೆ ಮತ್ತು ರಾಜ್ಯ ಮಾಹಿತಿ ಆಯೋಗಗಳ ರಚನೆಗೆ ಮತ್ತು ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಆನುಷಂಗಿಕವಾದ ವಿಷಯಗಳಿಗೆ ಉಪಬಂಧ ಕಲ್ಪಿಸುವ ಅಧಿನಿಯಮ.

ಭಾರತ ಸಂವಿಧನವು ಪ್ರಜಾಸತ್ತಾತ್ಮಕ ಗಣರಾಜ್ಯವನ್ನು ಸ್ಥಾಪಿಸಿರುವುದರಿಂದ:

ಪ್ರಜಾಪ್ರಭುತ್ವದ ಕಾರ್ಯನಿರ್ವಹಣೆಗೆ ಹಾಗೂ ಭ್ರಷ್ಟಾಚಾರ ನಿಯಂತ್ರಣಕ್ಕೆ ಮತ್ತು ಸರ್ಕಾರಗಳು ಹಾಗೂ ಅವುಗಳ ಅಂಗ ಸಂಸ್ಥೆಗಳು ಜನರಿಗೆ ಜವಾಬ್ದಾರಿಯಾಗಿರುವಂತೆ ಮಾಡಲು ತಿಳುವಳಿಕೆಯುಳ್ಳ ನಾಗರೀಕರು ಮತ್ತು ಮಾಹಿತಿಯ ಪಾರದರ್ಶಕತೆಯು ಪ್ರಮುಖವಾಗಿರುವದರಿಂದ.

ವಾಸ್ತವಿಕ ಪದ್ಧತಿಯಲ್ಲಿ ಮಾಹಿತಿಯನ್ನು ಭಹಿರಂಗ ಪಡಿಸುವದರಿಂದ ಸರ್ಕಾರಗಳ ದಕ್ಷ ಕಾರ್ಯಾಚಾರಣೆಗಳು ಪರಿಮಿತ ಆರ್ಥಿಕ ಸಂಪನ್ಮೂಲಗಳನ್ನು ಗರಿಷ್ಠ ಪ್ರಮಾಣದಲ್ಲಿ ಬಳಸಿಕೊಳ್ಳುವದು ಮತ್ತು ಸೂಕ್ಷ್ಮ ಮಾಹಿತಿಯ ಗೌಪ್ಯತೆಯ ಸಂರಕ್ಷಣೆ ಒಳಗೊಂಡಂತೆ ಇತರ ಸಾರ್ವಜನಿಕ ಹಿತಾಸಕ್ತಿಗಳೊಂದಿಗೆ ಸಂಘರ್ಷ ಉಂಟಾಗುವ ಸಾಧ್ಯತ ಇರುವದರಿಂದ.

ಪ್ರಜಾಸತಾತ್ಮಕ ಆದರ್ಶದ ಸಾರ್ವಭೌಮತೆಯನ್ನು ಸಂರಕ್ಷಿಸುವದರ ಜೊತೆಗೆ ಸಂಘರ್ಷ ಕ್ಕೊಳಗಾಗುವ ಹಿತಾಸಕ್ತಿಗಳ ನಡುವೆ ಸಾಮರಸ್ಯ ಮೂಡಿಸುವದು ಅವಶ್ಯವಾಗಿರುವದರಿಂದ.

ಮಾಹಿತಿಯನ್ನು ಪಡೆಯಲು ಇಚ್ಛಿಸುವ ನಾಗರೀಕರಿಗೆ ಕೆಲವು ಮಾಹಿತಿ ಒದಗಿ ಸುವದಕ್ಕೆ ಉಪಬಂಧ ಕಲ್ಪಿಸುವದು ಈಗ ವಿಹಿತವಾಗಿರುವದರಿಂದ.

ಭಾರತ ಗಣರಾಜ್ಯದ 56ನೇ ವರ್ಷದಲ್ಲಿ ಸಂಸತ್ತಿನಿಂದ ಈ ಮುಂದಿನಂತೆ ಅಧಿನಿಯಮಿತ ವಾಗತಕ್ಕದ್ದು:-